# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 325 (2375)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು : ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರು

ವಿಷಯ : ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ಬಗ್ಗೆ

(ಅ) ಬೀದರ್ ಜಿಲ್ಲೆಯಲ್ಲಿ ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯ ವತಿಯಿಂದ ನಡೆಯುತ್ತಿರುವ ಮಯೂರ ಹೋಟೆಲ್‌ನ ಅವ್ಯವಹಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿವರವಾದ ಮಾಹಿತಿ ನೀಡುವುದು;

(ಆ) ಜಿಲ್ಲೆಯಲ್ಲಿ ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿಯಿಂದ ಮಯೂರ ಹೋಟೆಲ್‌ನ್ನು ಯಾವ ಏಜೆನ್ಸಿಗೆ ನೀಡಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಮಯೂರ ಹೋಟೆಲ್ ನಡೆಸುತ್ತಿರುವ ಏಜೆನ್ಸಿಯ ಹೆಸರು ಹಾಗೂ ಅದರ ಅಡಿಯಲ್ಲಿ ನಡೆಯುತ್ತಿರುವ ಬಾರ್, ಫಂಕ್ಷನ್ ಹಾಲ್ ಹಾಗೂ ಅಂಗಡಿಗಳನ್ನು ಲೀಸ್ ಮೇಲೆ ಕೊಡಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ಬಂದಿದ್ದಲಿ, ವಿವರವಾದ ಮಾಹಿತಿ ನೀಡುವುದು)